ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: ಸಿ3(7)ನಿ.ಹು.ಅ.ಪ :19/2019-20 ದಿನಾಂಕ:22.11.2019

-: ಜ್ಞಾಪನ :-

ವಿಷಯ:- 2019ರಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕ ವೃಂದದ ಸಿಆರ್‌ಪಿ/ಬಿಆರ್‌ಪಿ/ಶಿಕ್ಷಣ ಸಂಯೋಜಕ, ಈ ನಿರ್ದಿಷ್ಟ ಹುದ್ದೆಗಳನ್ನು ಲಿಖಿತ ಪರೀಕ್ಷೆ ನಡೆಸುವ ಮೂಲಕ ಭರ್ತಿ ಮಾಡುವ ಬಗ್ಗೆ

ಉಲ್ಲೇಖ:- 1] ಸಮಸಂಖ್ಯೆಯ ಈ ಕಛೇರಿ ಜ್ಞಾಪನ ದಿನಾಂಕ:03.10.2019

2] ಕರ್ನಾಟಕ ರಾಜ್ಯ ಬಡ್ತಿ ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರ ಸಂಘ(ರಿ) ರಾಜ್ಯ ಘಟಕ ಬೆಂಗಳೂರು ಇವರ ಮನವಿ ದಿನಾಂಕ:19.10.2019

3] ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ(ರಿ) ರವರ ಮನವಿ ದಿನಾಂಕ:07.11.2019

-&&&-

ವಿಷಯದನ್ವಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕ ವೃಂದದ ಸಿಆರ್‌ಪಿ/ಬಿಆರ್‌ಪಿ/ಶಿಕ್ಷಣ ಸಂಯೋಜಕ ಲಿಖಿತ ಪರೀಕ್ಷೆಗಳನ್ನು ಹಮ್ಮಿಕೊಳ್ಳುವ ಬಗ್ಗೆ ವಿಸ್ತೃತವಾದ ವೇಳಾಪಟ್ಟಿಯನ್ನು ಮಾರ್ಗಸೂಚಿ ಅಂಶಗಳ ಸಹಿತವಾಗಿ ಈಗಾಗಲೇ ಉಲ್ಲೇಖ [1] ರ ಜ್ಞಾಪನದಲ್ಲಿ ಅಧಿಸೂಚಿಸಲಾಗಿದೆ.

ಈ ಬಗ್ಗೆ ಉಲ್ಲೇಖ [2] ರಲ್ಲಿನ ಕೋರಿಕೆಯನ್ನು ಪರಿಶೀಲಿಸಲಾಗಿದ್ದು, ಮಾರ್ಗಸೂಚಿ-ವೇಳಾಪಟ್ಟಿ ಜ್ಞಾಪನದ ಪುಟ ಸಂಖ್ಯೆ 03ರಲ್ಲಿ ಪ್ರೌಢಶಾಲಾ ವೃಂದದ ಹುದ್ದೆಗಳಿಗೆ ಅರ್ಹತಾ ಷರತ್ತು ಕ್ರಮ ಸಂಖ್ಯೆ 03 ರಲ್ಲಿ "ಈ ಜ್ಞಾಪನ ಹೊರಡಿಸಿದ ದಿನಾಂಕಕ್ಕೆ ಕನಿಷ್ಠ 10 ವರ್ಷಗಳು ಪ್ರೌಢಶಾಲೆಗಳಲ್ಲಿ ಸೇವಾನುಭವವಿರಬೇಕು." ಎಂಬುದನ್ನು" **ಈ ಜ್ಞಾಪನ ಹೊರಡಿಸಿದ ದಿನಾಂಕಕ್ಕೆ ಕನಿಷ್ಠ 05 ವರ್ಷಗಳು ಪ್ರೌಢಶಾಲೆಗಳಲ್ಲಿ ಸೇವಾನುಭವವಿರಬೇಕು"** ಎಂಬುದಾಗಿ **ತಿದ್ದುಪಡಿಗೊಳಿಸಿದೆ.**

ಹಾಗೆಯೇ ಉಲ್ಲೇಖ (3) ರಲ್ಲಿನ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮನವಿಯಲ್ಲಿ 2018-19ನೇ ಸಾಲಿನ ಕಡ್ಡಾಯ ವರ್ಗಾವಣೆ ಸ್ಥಳ ನಿಯುಕ್ತಿ ಪ್ರಕರಣಗಳಲ್ಲಿಯೂ ವಿಷಯದನ್ವಯದ ಪರೀಕ್ಷೆಗಳನ್ನು ಬರೆಯಲು ಅವಕಾಶ ನೀಡಬೇಕು ಎಂಬುದಾಗಿ ಕೋರಿಕೆ ಇದೆ. ಹೆಚ್ಚುವರಿಗೊಂಡ ಶಿಕ್ಷಕರಿಗೆ ನೀಡಿರುವಂತೆ **"2018-19ನೇ ಸಾಲಿನಲ್ಲಿ ಕಡ್ಡಾಯ ವರ್ಗಾವಣೆಗೊಳಪಟ್ಟು ಸ್ಥಳ ನಿಯುಕ್ತಿಗೊಂಡಿರುವ ಆಸಕ್ತ ಶಿಕ್ಷಕರಿಗೂ ಸಹ"** ನಿರ್ದಿಷ್ಟ ಹುದ್ದೆಗಳಿಗೆ ಪರೀಕ್ಷೆಯನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಿದೆ. ಈ ಬಗ್ಗೆ ಅರ್ಹತೆಗಾಗಿ ಪೂರ್ವದ ಶಾಲೆಯ ಸೇವೆಯನ್ನು ಪರಿಗಣಿಸಲಾಗುತ್ತದೆ. ಉಳಿದಂತೆ ಎಲ್ಲಾ ಸೂಚನೆಗಳನ್ನು ಯಥಾವತ್ತಾಗಿ ಮುಂದುವರೆಸಿದೆ.

**"ಮಾನ್ಯ ಆಯುಕ್ತರ ಆದೇಶದ ಮೇರೆಗೆ"**

22/11/19

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

ಇವರಿಗೆ:-

1. ನಿರ್ದೇಶಕರು[ಪರೀಕ್ಷೆಗಳು], ಕೆ.ಎಸ್.ಇ.ಇ.ಬಿ. ಮಲ್ಲೇಶ್ವರಂ, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪ್ರಾಂಶುಪಾಲರು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ(ಡಯಟ್) ರವರಿಗೆ,
4. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ .
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ
8. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು.
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
10. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
11. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳವರಿಗೆ.
12. ಆಯುಕ್ತರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ.
13. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ.
14. ಕಛೇರಿ ಪ್ರತಿ.